# ಉಪತಹಶೀಲ್ದಾರವರ ನ್ಯಾಯಾಲಯ, ಕೋಗಳಿ, ಹ.ಬೊ.ಹಳ್ಳಿ ತಾಲೂಕು.

ಸಂ/ಕಂ/ಪಹಣಿ/ವಿವಾದ/06/2016-17 ದಿನಾಂಕ:22.09.2016

ಉಪಸ್ಥಿತರು:-ವಿ.ಹೆಚ್.ಮಲ್ಲಿಕಾರ್ಜುನ,
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ

| ಅರ್ಜಿದಾರರು | ತಕರಾರುದಾರರು |
|---|---|
| ಶ್ರೀ ಎನ್.ಶಿವಕುಮಾರ ತಂದೆ ಎನ್. ನೀಲಕಂಠಯ್ಯ<br>ಗ್ರಾಮ:-ಹೊಸಪೇಟೆ ತಾ:- ಹೊಸಪೇಟೆ | ಶ್ರೀ ಕೆ.ಎಂ.ವೃಷಬೇಂದ್ರಯ್ಯ ತಂದೆ ಲೇಟ್ ಗುರುಸಿದ್ದಯ್ಯ<br>ಗ್ರಾಮ:-ಎಂ.ಬಿ.ಕಾಲೋನಿ, ಹ.ಬೊ.ಹಳ್ಳಿ ತಾ:-ಹೆಚ್.ಬಿ.ಹಳ್ಳಿ |

**ವಿವಾದಿತ ಜಮೀನಿನ ವಿವರ:**

| ಕ್ರ.ಸಂ. | ತಾಲೂಕು | ಗ್ರಾಮ | ಸ.ನಂ. | ವಿಸ್ತೀರ್ಣ(ಎಕರೆಗಳಲ್ಲಿ) | ತರಹೆ |
|---|---|---|---|---|---|
| 1. | ಹಗರಿಬೊಮ್ಮನಹಳ್ಳಿ | ಹರೇಗೊಂಡನಹಳ್ಳಿ | 30/3 | 5-00 | ಖುಷ್ಕಿ |

**ಪೀಠಿಕೆ:-**

ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಹರೇಗೊಂಡನಹಳ್ಳಿ ಗ್ರಾಮದ ವಿವಾದಿತ ಜಮೀನಿಗೆ ಸಂಬಂಧಿಸಿದಂತೆ, ಬಳ್ಳಾರಿ ಜಿಲ್ಲೆ ಹೊಸಪೇಟೆ ತಾಲೂಕಿನ ಹೊಸಪೇಟೆ ಗ್ರಾಮದ ನಿವಾಸಿಯಾದ ಎನ್.ಶಿವಕುಮಾರ ತಂದೆ ಎನ್. ನೀಲಕಂಠಯ್ಯ ಇವರು ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಎಂ.ಬಿ.ಕಾಲೋನಿ ಹಗರಿಬೊಮ್ಮನಹಳ್ಳಿ ಗ್ರಾಮದ ಕೆ.ಎಂ.ವೃಷಬೇಂದ್ರಯ್ಯ ತಂದೆ ಲೇಟ್ ಗುರುಸಿದ್ದಯ್ಯ ಇವರಿಂದ ನೋಂದಾಯಿತ ಕ್ರಯ ದಸ್ತಾವೇಜು ಸಂಖ್ಯೆ ಹೆಚ್.ಬಿ.ಹೆಚ್-1-00636-2016-2017 ದಿನಾಂಕ:20.05.2016 ರಂದು ಮೊತ್ತ ರೂ:3,45,000/-ಕ್ಕೆ ಖರೀದಿಸಿರುತ್ತಾರೆ. ಗ್ರಾಮದಲ್ಲಿ ನಮೂನೆ-21ರ ನೋಟೀಸನ್ನು ದಿನಾಂಕ:21.05.2016 ರಂದು ಜಾರಿಮಾಡಲಾಗಿ, ನಿಗದಿತ ಅವಧಿಯೊಳಗೆ ಅಂದರೆ ದಿನಾಂಕ:13.06.2016 ರಂದು ಕೆ.ಎಂ.ವೃಷಬೇಂದ್ರಯ್ಯ ತಂದೆ ಲೇಟ್ ಗುರುಸಿದ್ದಯ್ಯ ಇವರು ತಕರಾರು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಕಾರಣ, ಎಂ.ಆರ್.ನಂ.46/15-16 ರ ಕಡತವು ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಕೋಗಳಿ ಇವರು ಈ ಕಾರ್ಯಾಲಯಕ್ಕೆ ವರದಿ ಸಲ್ಲಿಸಿರುತ್ತಾರೆ. ಉಭಯ ಪಕ್ಷಕಾರರಿಗೆ ದಿನಾಂಕ:28.07.2016ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸನ್ನು ಜಾರಿ ಮಾಡಲಾಯಿತು.

ಪ್ರಕರಣವನ್ನು ದಿನಾಂಕ:28.07.2016 ಮರಿಂದ 08.09.2016 ರವರೆಗೆ ವಿಚಾರಣೆಯನ್ನು ಮಾಡಲಾಯಿತು. ಉಭಯರು ಹಾಜರಾಗಿರುತ್ತಾರೆ. ಅರ್ಜಿದಾರರು ಹಾಜರಾಗಿ ಹೇಳುವಂತೆ; ಸದರಿ ಪ್ರಕರಣದಲ್ಲಿ ಪಟ್ಟಾದಾರರ ಸ್ವಯಾರ್ಜಿತ ಆಸ್ತಿಯಾಗಿದ್ದು, ನಾನು ನೋಂದಾಯಿತ ಕ್ರಯ ಪ್ರಕಾರ ಹಕ್ಕು ತನ್ನ ಹೆಸರಿಗೆ ಬದಲಾವಣೆ ಮಾಡಲು ಕೋರಿರುತ್ತಾರೆ. ಪಟ್ಟಾದಾರರು ಹಾಜರಾಗಿ ಹೇಳುವಂತೆ; ಸದರಿ ಜಮೀನು ಅರ್ಜಿದಾರರ ಹೆಸರಿಗೆ ಹಕ್ಕು ಬದಲಾವಣೆ ಮಾಡಲು ನಮ್ಮ ಯಾವುದೇ ತಂಟೆ, ತಕರಾರು ಇರುವುದಿಲ್ಲ. ಎಂದು ಮೌಖಿಕವಾಗಿ ಹೇಳಿಕೆ ನೀಡಿರುತ್ತಾರೆ.

ಪುಟ-2ಕ್ಕೆ..

ಪ್ರಕರಣದಲ್ಲಿ ದಿನಾಂಕ:03.09.2016 ರಂದು ಉಭಯರು ಹಾಜರಾಗಿರುತ್ತಾರೆ. ತಕರಾರುದಾರರು ಹಾಜರಾಗಿ ಹೇಳುವಂತೆ; ಸದರಿ ಜಮೀನಿಗೆ ನಾನು ತಕರಾರು ಅರ್ಜಿಯನ್ನು ಸಲ್ಲಿಸಿದ್ದು, ಈಗ ನಾನು ನನ್ನ ತಕರಾರು ಅರ್ಜಿಯನ್ನು ಹಿಂದಕ್ಕೆ ಪಡೆಯುವುದಾಗಿ ಮೌಖಿಕವಾಗಿ ಹೇಳಿಕೆ ನೀಡಿರುತ್ತಾರೆ. ಹಾಗೂ ಒಪ್ಪಿಗೆ ಪತ್ರವನ್ನು ಲಿಖಿತವಾಗಿ ಸಲ್ಲಿಸಿರುತ್ತಾರೆ.

ಪ್ರಕರಣದಲ್ಲಿ ಅರ್ಜಿದಾರರು ಮತ್ತು ತಕರಾರುದಾರು ನೀಡಿದ ಹೇಳಿಕೆ ಮತ್ತು ದಾಖಲೆಗಳನ್ನು ಪರಿಶೀಲನೆ ಮಾಡಲಾಗಿ, ಬಳ್ಳಾರಿ ಜಿಲ್ಲೆ ಹೊಸಪೇಟೆ ತಾಲೂಕಿನ ಹೊಸಪೇಟೆ ಗ್ರಾಮದ ನಿವಾಸಿಯಾದ ಎನ್.ಶಿವಕುಮಾರ ತಂದೆ ಎನ್. ನೀಲಕಂಠಯ್ಯ ಇವರು ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಎಂ.ಬಿ.ಕಾಲೋನಿ ಹಗರಿಬೊಮ್ಮನಹಳ್ಳಿ ಗ್ರಾಮದ ಕೆ.ಎಂ.ವೃಷಬೇಂದ್ರಯ್ಯ ತಂದೆ ಲೇಟ್ ಗುರುಸಿದ್ದಯ್ಯ ಇವರಿಂದ ನೋಂದಾಯಿತ ಕ್ರಯ ದಸ್ತಾವೇಜು ಸಂಖ್ಯೆ ಹೆಚ್.ಬಿ.ಹೆಚ್-1-00636-2016-2017 ದಿನಾಂಕ:20.05.2016 ರಂದು ಮೊತ್ತ ರೂ:3,45,000/-ಕ್ಕೆ ಖರೀದಿಸಿರುವುದು ಕಂಡುಬಂದಿರುತ್ತದೆ. ನೋಂದಾಯಿತ ದಸ್ತಾವೇಜುಗಳನ್ನು ಕಂದಾಯ ಅಧಿಕಾರಿಗಳಿಗೆ ಮ್ಯುಟೇಷನ್ ಬದಲಾವಣೆಗೆ ಸಲ್ಲಿಸಿದಲ್ಲಿ, ಕಂದಾಯ ಅಧಿಕಾರಿಗಳು ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 128 ಮತ್ತು 129 ರನ್ವಯ ಅಂತಹ ನೋಂದಾಯಿತ ದಸ್ತಾವೇಜಿಗೆ ಚಾಲನೆ ನೀಡತಕ್ಕದ್ದು. ಕಂದಾಯ ಅಧಿಕಾರಿಗಳಿಗೆ ಅಂತಹ ದಸ್ತಾವೇಜಿನ ನೈಜತೆಯನ್ನು ನಿರ್ಣಯಿಸುವ ಅಧಿಕಾರ ಇರುವುದಿಲ್ಲದ ಹಾಗೂ ತಕರಾರುದಾರರು ತಮ್ಮ ತಕರಾರು ಅರ್ಜಿಯನ್ನು ಹಿಂದಕ್ಕೆ ಪಡೆದುಕೊಂಡಿರುತ್ತಾರೆ. ಪ್ರಯುಕ್ತ, ನೋಂದಾಯಿತ ಕ್ರಯ ಪ್ರಕಾರ ಕ್ರಯದಾರರ ಹೆಸರಿಗೆ ಹಕ್ಕುಬದಲಾವಣೆ ಮಾಡಲು ಈ ಕೆಳಕಂಡಂತೆ ಆದೇಶ;

## -:ಆದೇಶ:-

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಹಾಗೂ ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 128 ಮತ್ತು 129 ರನ್ವಯ ಮತ್ತು ಎಂ.ಆರ್.ನಂ.46/2015-16 ರ ಪ್ರಕಾರ, ಹರೇಗೊಂಡನಹಳ್ಳಿ ಗ್ರಾಮದ ಸ.ನಂ. 30/3 ವಿಸ್ತೀರ್ಣ 5-00 ಎಕರೆ ಜಮೀನು ಕ್ರಯದಾರರಾದ ಎನ್.ಶಿವಕುಮಾರ ತಂದೆ ಎನ್. ನೀಲಕಂಠಯ್ಯ ಇವರ ಹೆಸರಿಗೆ ನೋಂದಾಯಿತ ಕ್ರಯ ಪ್ರಕಾರ ಹಕ್ಕುಬದಲಾವಣೆ ಮಾಡಲು ಆದೇಶಿಸಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:22.09.2016 ರಂದು ತೆರದ ನ್ಯಾಯಾಲಯದಲ್ಲಿ ಘೋಷಿಸಿದೆ.

22/9/16
[ವಿ.ಹೆಚ್.ಮಲ್ಲಿಕಾರ್ಜುನ]
**ಉಪ ತಹಶೀಲ್ದಾರರು,**
**ನಾಡ ಕಾರ್ಯಾಲಯ,ಕೋಗಳಿ**

ಪ್ರತಿಯನ್ನು:-

1. ಅರ್ಜಿದಾರರು ಮತ್ತು ತಕರಾರುದಾರರಿಗೆ.
2. ಭೂಮಿ ಕೇಂದ್ರ, ತಾಲೂಕು ಕಛೇರಿ, ಹಗರಿಬೊಮ್ಮನಹಳ್ಳಿ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಕಂದಾಯ ನಿರೀಕ್ಷಕರು, ಕೋಗಳಿ.
4. ಶುದ್ಧಪ್ರತಿ ಕಡತಕ್ಕೆ.